# About us – ಇಲಾಖೆ ಕುರಿತು

ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕ ಇಲಾಖೆಯು ಕಾರ್ಮಿಕರ ಪಾಲಿಗೆ ಒಬ್ಬ ಸ್ನೇಹಿತ / ತತ್ವಜ್ಞಾನಿ / ಮಾರ್ಗದರ್ಶಿಯಿದ್ದಂತೆ. ಕೇಂದ್ರದ 23 ಕಾಯ್ದೆಗಳು ಹಾಗೂ ರಾಜ್ಯದ 04 ಕಾರ್ಮಿಕ ಕಾಯ್ದೆಗಳನ್ನು ಅನುಷ್ಠಾನಗೊಳಸುತ್ತಿದ್ದು, ರಾಜ್ಯದಲ್ಲಿ ಉದ್ಭವಿಸುವ ಕೈಗಾರಿಕಾ ವಿವಾದಗಳನ್ನು ತ್ರೀಪಕ್ಷೀಯವಾಗಿ ಸೌಹಾರ್ದಯುತ ನೆಲೆಯಲ್ಲಿ ಬಗೆಹರಿಸಿ, ಕೈಗಾರಿಕಾ ಶಾಂತಿಯನ್ನು ಕಾಪಾಡುವ ನಿಟ್ಟಿನಲ್ಲಿ ಮೇಲ್ವಿಚಾರಣೆ ನಡೆಸುತ್ತಾ ಬಂದಿರುತ್ತದೆ. ರಾಜ್ಯದಲ್ಲಿ ಕಾರ್ಮಿಕ ಇಲಾಖೆಯು 1935ರಲ್ಲಿ ಅಸ್ತಿತ್ವಕ್ಕೆ ಬಂದಿರುತ್ತದೆ.

## ಕಾರ್ಮಿಕ ಇಲಾಖೆಯ ಪಾತ್ರ –

ಕಾರ್ಮಿಕ ವರ್ಗದ ಹಕ್ಕುಗಳ ರಕ್ಷಣೆ ಹಾಗೂ ಉತ್ತೇಜಿಸುವುದಾಗಿದ್ದು, ಇದರ ಜೊತೆಗೆ ರಾಜ್ಯದಲ್ಲಿ ಕೈಗಾರಿಕೆಗಳ ಬೆಳವಣಿಗೆಗೆ ಅನುಕೂಲಕರ ವಾತಾವರಣವನ್ನು ಕಲ್ಪಿಸುವುದೂ ಸೇರಿದಂತೆ – ಮಾನವ ಸಂಪನ್ಮೂಲದ ಸಮರ್ಪಕ ಸದ್ಬಳಕೆ ಹಾಗೂ ಸರ್ವತೋಮುಖ ಅಭಿವೃದ್ಧಿಗೆ ಭದ್ರ ಬುನಾದಿಯನ್ನು ನಿರ್ಮಿಸುವುದು ಹಾಗೂ ಅರ್ಥಪೂರ್ಣ ಕೈಗಾರಿಕಾ ಬಾಂಧವ್ಯವನ್ನು ಕಾಪಾಡುವುದರ ಮೂಲಕ ರಾಜ್ಯದ ಸಂಸ್ಕೃತಿ ಹಾಗೂ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗಿದೆ.

ಇಲಾಖೆಯ ಕಾರ್ಯ ಚಟುವಟಿಕೆಗಳಾದ ವಿವಿಧ ಕಾರ್ಮಿಕ ಕಾಯ್ದೆಗಳ ಅನುಷ್ಠಾನ, ಸಾಮಾಜಿಕ ಭದ್ರತೆಯ ಯೋಜನೆಗಳನ್ನು ಜಾರಿಗೊಳಸುವುದರ ಮೂಲಕ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಸುರಕ್ಷತೆ ಒದಗಿಸುವುದರ ಮೂಲಕ ಕಾರ್ಮಿಕರ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತಿದೆ.

ಈ ಹಿಂದೆ ಕೃಷಿ ಕಾರ್ಮಿಕರು ಹಾಗೂ ಮಾಲೀಕರ ಸಂಬಂಧವು ಸರಳ ಹಾಗೂ ಸೌಹಾರ್ದಯುತವಾಗಿತ್ತು. ಆದರೆ ತದನಂತರದಲ್ಲಾದ ಕೈಗಾರಿಕೀಕರಣದ ಪರಿಣಾಮದಿಂದಾಗಿ, ರಾಜ್ಯದಲ್ಲಿ ಹೆಚ್ಚು ಕೈಗಾರಿಕೆಗಳು ಸ್ಥಾಪಿತವಾದವು. ಇದರಿಂದಾಗಿ ಕಾರ್ಮಿಕರ ಸಂಖ್ಯೆ ಹೆಚ್ಚಾಯಿತು. ಜೊತೆಜೊತೆಗೆ ಕಾರ್ಮಿಕ ಸಂಘಟನೆಗಳು ಹಾಗೂ ಅವುಗಳ ಚಟುವಟಿಕೆಗಳು ತೀವ್ರತರವಾಗಿ ಬೆಳವಣಿಗೆಯಾಗಿರುವುದನ್ನು ಕಾಣಬಹುದಾಗಿದೆ. ಸ್ವಾತಂತ್ರ್ಯ ಪೂರ್ವದಲ್ಲಿ ಕೈಗಾರಿಕಾ ವಲಯದ ಬೆಳವಣಿಗೆಯು ಸೀಮಿತವಾಗಿತ್ತು. ಆದ್ದರಿಂದ, ಕಾರ್ಮಿಕ ಸಂಘಟನೆಯೂ ಕೂಡಾ ಸೀಮಿತವಾಗಿಯೇ ಇತ್ತು. ಅಂದು ರಾಜ್ಯದಲ್ಲಿ ಕಾರ್ಮಿಕ ವಲಯಕ್ಕೆ ಹೆಚ್ಚಿನ ಮಹತ್ವವನ್ನು ನೀಡಿರಲಿಲ್ಲ. ಆದರೆ, ಪ್ರಸ್ತುತದಲ್ಲಿ ಕಾರ್ಮಿಕ ವಲಯವು ರೈತ ಸಮುದಾಯವನ್ನು ಬಿಟ್ಟರೇ, 2ನೇ ಅತಿ ದೊಡ್ಡ ಸಮುದಾಯವಾಗಿದೆ.

ಹಿಂದಿನ ದಿನಗಳಲ್ಲಿ ಕಾರ್ಮಿಕರನ್ನು ಒಂದು ವಸ್ತುವಿನಂತೆ ಪರಿಗಣಿಸಲಾಗುತ್ತಿತ್ತು. ಅದರಿಂದಾಗಿ ಉದ್ಯೋಗದ ಸೇವಾ ಷರತ್ತುಗಳು ಅಷ್ಟಾಗಿ ಮಹತ್ವ ಪಡೆಯದೇ ಮಾಲೀಕರ ನಿಯಂತ್ರಣಕ್ಕೊಳಪಟ್ಟಿತ್ತು. ತೋಟಗಾರಿಕಾ ವಲಯಗಳಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರು ಮತ್ತು ಮಾಲೀಕರ ನಡುವೆ – Contract Act 1859ರ ಪ್ರಕಾರ ಆದ ಒಪ್ಪಂದಗಳಲ್ಲಿನ ಷರತ್ತುಗಳ ಉಲ್ಲಂಘನೆಯಾದಲ್ಲಿ ಹಾಗೂ ತೋಟ ಕಾರ್ಮಿಕರು ಕೆಲಸ

ಬಿಟ್ಟು ಓಡಿ ಹೋದ ಸಂದರ್ಭಗಳಲ್ಲಿ ಅವರುಗಳನ್ನು ಆರಕ್ಷಕರು ಬಂಧಿಸುವುದಲ್ಲದೇ ಕ್ರಿಮಿನಲ್ ಆರೋಪಗಳನ್ನು ಹೊರಿಸಿ, ಜೂಡಿಸಿಯಲ್ ನ್ಯಾಯಾಲಯಗಳಲ್ಲಿ ಆರೋಪಿಯನ್ನಾಗಿಸಿ ಶಿಕ್ಷೆ ವಿಧಿಸಲಾಗುತ್ತಿತ್ತು. ಆ ದಿನಗಳಲ್ಲಿ ಕಾರ್ಮಿಕರ ರಕ್ಷಣೆ ಮತ್ತು ಅವರ ಹಕ್ಕುಗಳನ್ನು ಕಾಪಾಡುವ ಯಾವುದೇ ಕಾರ್ಮಿಕ ಕಾನೂನುಗಳು ರಚನೆಯಾಗಿರಲಿಲ್ಲ. ಜೊತೆಗೆ ಕಾರ್ಮಿಕರಿಗೂ ಅವರುಗಳ ಹಕ್ಕಿನ ಅರಿವಿಲ್ಲವಾದ್ದರಿಂದ, ಅವರು ಮಾಲೀಕರಿಂದ ಶೋಷಣೆಗೆ ಒಳಗಾಗುತ್ತಿದ್ದರು.

ಕಾರ್ಮಿಕರ ಇಂಥ ಸಂಕಷ್ಟಗಳನ್ನು ಪರಿಹರಿಸಿ, ಅವರ ಹಕ್ಕುಗಳ ರಕ್ಷಣೆ ಹಾಗೂ ಸಮಗ್ರ ಅಭಿವೃದ್ಧಿಯ ಧ್ಯೇಯವನ್ನಿರಿಸಿಕೊಂಡು, ಕಾರ್ಮಿಕ ಇಲಾಖೆಯು ಅಸ್ತಿತ್ವಕ್ಕೆ ಬಂದಿದ್ದು, ಅದು ರಾಜ್ಯದಲ್ಲಿ ಮಾನವ ಸಂಪನ್ಮೂಲ ಹಾಗೂ ಕೈಗಾರಿಕೆಗಳ ನಡುವೆ ಉತ್ತಮ ಸಮನ್ವಯತೆ ಸಾಧಿಸಿ, ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಪೂರಕವಾಗಿ ಕಾರ್ಯ ನಿರ್ವಹಿಸುತ್ತಿದೆ.

ಕಾರ್ಮಿಕ ಇಲಾಖೆಯು 1935ರಲ್ಲಿ ಅಸ್ತಿತ್ವಕ್ಕೆ ಬಂದು ಇಂದಿಗೆ 8 ದಶಕಗಳಾಗಿದ್ದು, ಅದರ ಉದ್ದೇಶಿತ ಕಾರ್ಯ ಚಟುವಟಿಕೆಗಳನ್ನು ಅರ್ಥಪೂರ್ಣವಾಗಿ ನಡೆಸಿಕೊಂಡು ಬಂದಿರುತ್ತದೆ. ಪ್ರಸ್ತುತ ಕಾರ್ಮಿಕ ಇಲಾಖೆಯ ಕಾರ್ಯ ಚಟುವಟಿಕೆಗಳಲ್ಲಿ ಮಹತ್ತರ ಬದಲಾವಣೆಯಾಗಿದ್ದು, ಕಾರ್ಮಿಕರ ಶ್ರೇಯೋಭಿವೃದ್ಧಿ ಹಾಗೂ ಕೈಗಾರಿಕೆಗಳ ಅಭಿವೃದ್ಧಿ ದೃಷ್ಟಿಯಿಂದ ವೈವಿಧ್ಯಮಯವಾದ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಂಡು ಪರಿಣಾಮಕಾರಿಯಾಗಿ ನಿರ್ವಹಿಸುತ್ತಿದೆ. ಇಲಾಖೆಯು ಕೇಂದ್ರದ 23 ಹಾಗೂ ರಾಜ್ಯದ 04 ಕಾರ್ಮಿಕ ಕಾಯ್ದೆಗಳ ಅನುಷ್ಠಾನಗೊಳಿಸುವುದು. ಮಾಲೀಕ ಮತ್ತು ಕಾರ್ಮಿಕರ ನಡುವೆ ಉದ್ಭವಿಸುವ ಕೈಗಾರಿಕಾ ವಿವಾದಗಳನ್ನು ಸೌಹರ್ದಯುತವಾಗಿ ತ್ರಿಪಕ್ಷೀಯವಾಗಿ ಬಗೆಹರಿಸುವುದು.

ಅಸಂಘಟಿತ ಕಾರ್ಮಿಕರು ಸೇರಿದಂತೆ, ಎಲ್ಲಾ ವರ್ಗದ ಕಾರ್ಮಿಕರ ಸರ್ವತೋಮುಖ ಅಭಿವೃದ್ಧಿ ದೃಷ್ಟಿಯಿಂದ ಹಲವಾರು ಸಾಮಾಜಿಕ ಹಾಗೂ ಆರ್ಥಿಕ ಕಲ್ಯಾಣ ಯೋಜನೆಗಳನ್ನು ಜಾರಿಗೆ ತಂದಿರುತ್ತದೆ. ಉದಾಹರಣೆಗೆ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಜಾರಿಗೆ ತಂದಿರುವ ಸೌಲಭ್ಯಗಳು, ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ವತಿಯಿಂದ ಜಾರಿಗೆ ತಂದಿರುವ ಖಾಸಗಿ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆ, ರಾಷ್ಟ್ರೀಯ ಸ್ವಾಸ್ಥ್ಯ ಬಿಮಾ ಯೋಜನೆ ಮುಂತಾದವುಗಳು. ಇಲಾಖೆಯ ಕಾರ್ಯಚಟುವಟಿಕೆಗಳು ಹಾಗೂ ಯೋಜನೆಗಳ ಬಗ್ಗೆ ಸಂಬಂಧಿಸಿದ ಕಾರ್ಮಿಕರು, ಮಾಲೀಕರು ಹಾಗೂ ಸಾರ್ವಜನಿಕರಿಗೆ ತಿಳುವಳಿಕೆ ನೀಡುವ ನಿಟ್ಟಿನಲ್ಲಿ ಹಲವಾರು ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ.

ಈ ರೀತಿಯಾಗಿ ಕಾರ್ಮಿಕ ಇಲಾಖೆಯು ಇಂದು ತನ್ನ ವೈವಿಧ್ಯಮಯ ಕಾರ್ಯ ಚಟುವಟಿಕೆ ಹಾಗೂ ತನ್ನದೇ ಆದ ಪಾತ್ರ ನಿರ್ವಹಣೆಯಿಂದ ರಾಜ್ಯದಲ್ಲಿ ಪ್ರಮುಖ ಇಲಾಖೆ ಎಂಬ ಮನ್ನಣೆಗೆ ಪಾತ್ರವಾಗಿದೆ.